ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 13ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸಂತಾಪ ಸೂಚನೆ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

3. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:–

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ.

... 2/ ..

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ್ ಅವರು** - ರಾಜ್ಯದಲ್ಲಿ ಉಳುಮೆ ಮಾಡುತ್ತಿರುವ ರೈತರು ಗೇಣಿ ಹಕ್ಕು ಪಡೆಯಲು ಅನುಕೂಲವಾಗುವಂತೆ ರಿಗ್ರ್ಯಾಂಟ್ ಮಾಡಲು ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಅವರು** - ವಿಜಯಪುರ ಜಿಲ್ಲೆಯ ವಿವಿಧ ತಾಲ್ಲೂಕಿನ ನೀರಾವರಿ ವಂಚಿತ ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಒದಗಿಸಲು ಹೋರ್ತಿ–ರೇವಣಸಿದ್ಧೇಶ್ವರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

3) **ಶ್ರೀ ಅಭಯ ಪಾಟೀಲ ಅವರು** - ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಏಕ ವಸತಿ ನಿವೇಶನಕ್ಕೆ ಅನುಮೋದನೆಯನ್ನು ಪಡೆದುಕೊಂಡು ಅವುಗಳನ್ನು ಉಪ ವಿಭಾಗ ಮಾಡಿಸಿಕೊಂಡು ಕಾನೂನುಬಾಹಿರವಾಗಿ ಮಾರಾಟ ಮಾಡಿ ಸರ್ಕಾರಕ್ಕೆ ನಷ್ಟ ಉಂಟು ಮಾಡಲು ಕಾರಣರಾಗಿರುವ ಭೂ ಮಾಪನ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಅನಧಿಕೃತವಾಗಿ ಮಾರಾಟ ಮಾಡಿದ/ನಿರ್ಮಿಸಿದ ಮನೆಗಳ ಖರೀದಿ ಕರಾರು ಪತ್ರಗಳನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4) **ಶ್ರೀ ಟಿ.ಡಿ. ರಾಜೇಗೌಡ ಅವರು** – ಅಟಲ್‌ಜೀ ಕೇಂದ್ರಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸರ್ವೆ ಇಲಾಖೆಯ ಬಾಂದು ಜವಾನರುಗಳಿಗೆ ವೇತನ ಪಾವತಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ರವೀಂದ್ರ ಶ್ರೀಕಂಠಯ್ಯ ಅವರು** - ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೆ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಎಸ್. ಕುಮಾರ್ ಬಂಗಾರಪ್ಪ ಅವರು** - ಸೊರಬ ವಿಧಾನ ಸಭಾ ಕ್ಷೇತ್ರದಲ್ಲಿ ಖಾಲಿಯಿರುವ ಗ್ರಾಮ ಲೆಕ್ಕಿಗರ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಪಿ. ರಾಜೀವ್ ಅವರು** - ಕುಡಚಿ ಪಟ್ಟಣದ ಬಳಿ ಕೃಷ್ಣ ನದಿಗೆ ನಿರ್ಮಿಸಲಾಗುತ್ತಿರುವ ಸೇತುವೆಯಿಂದಾಗಿ ನದಿ ತೀರದ ಸಾವಿರಾರು ಎಕರೆ ಪ್ರದೇಶವು ಮುಳುಗಡೆಯಾಗುವುದನ್ನು ತಪ್ಪಿಸಲು ಕಲ್ವರ್ಟ್‌ಗಳನ್ನು ನಿರ್ಮಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** - ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಹಾಗೂ ಗುಡಿಬಂಡೆ ಪಟ್ಟಣದಲ್ಲಿ ಮಹರ್ಷಿ ವಾಲ್ಮೀಕಿ ಭವನವನ್ನು ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9) **ಡಾ. ಅಜಯ್ ಧರ್ಮಸಿಂಗ್ ಅವರು** - ರಾಜ್ಯದಲ್ಲಿ ನಿರಂತರ ಮಳೆಯಿಂದಾಗಿ ದೇವಾಲಯಗಳ ಕಟ್ಟಡಗಳು ಸೋರುತ್ತಿದ್ದು, ಅವುಗಳ ನಿರ್ವಹಣೆಯನ್ನು ಮಾಡದಿರುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

10) **ಶ್ರೀ ಯು.ಟಿ. ಖಾದರ್ ಅವರು** - ಮಳೆ ಹಾನಿಯಿಂದಾಗಿ ರಾಜ್ಯದ ಕಡಲ ತೀರದಲ್ಲಿ ಹಾಳಾಗಿರುವ ಕೊಂಡಿ ರಸ್ತೆಗಳನ್ನು ನಿರ್ಮಿಸುವ ಬಗ್ಗೆ ಹಾಗೂ ಸಂಕಷ್ಟದಲ್ಲಿರುವ ಮೀನುಗಾರಿಕೆ ಉದ್ಯಮದವರಿಗೆ ಪರಿಹಾರವನ್ನು ನೀಡುವ ಬಗ್ಗೆ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm